**All India Radio: Bangalore**
**Regional Bulletin In Kannada**
**06.02.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**06.02.2025 / 6.40 p.m.**
*********************

ಮುಖ್ಯಾಂಶಗಳು

೧. ಮೆಟ್ರೋ ಪ್ರಯಾಣ ದರ ಹೆಚ್ಚಳದ ಬಗ್ಗೆ ಸಮಿತಿ ತೀರ್ಮಾನ - ನೀರಿನ ದರ ಏರಿಕೆ ಬಗ್ಗೆ ಸಂಪುಟದಲ್ಲಿ ಚರ್ಚೆ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೨. ಗ್ರಾಮಪಂಚಾಯಿತಿಗಳ ದರ್ಶಿನಿ ಕಾರ್ಯಕ್ರಮಕ್ಕೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ

೩. ಇದೇ ೧೦ ರಿಂದ ಬಾನಂಗಳದಲ್ಲಿ ಲೋಹದ ಹಕ್ಕಿಗಳ ಕಲರವ; ಯಲಹಂಕ ವಾಯುನೆಲೆಯಲ್ಲಿ ಯುದ್ಧ ವಿಮಾನಗಳ ಅಭ್ಯಾಸ

೪. ಬಿಜೆಪಿಯ ಆಂತರಿಕ ಬೆಳವಣಿಗೆ ದುರದೃಷ್ಟಕರ - ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

******************

“ಮೆಟ್ರೋ ಪ್ರಯಾಣ ದರ ಹೆಚ್ಚಳದ ಬಗ್ಗೆ ಬಿಎಂಆರ್ ಸಿಎಲ್ ತೀರ್ಮಾನ ಕೈಗೊಳ್ಳಲಿದ್ದು, ಇದಕ್ಕಾಗಿ ನ್ಯಾಯಮೂರ್ತಿ ನೇತೃತ್ವದಲ್ಲಿ ಕೇಂದ್ರದ ಸಮಿತಿ ರಚಿಸಲಾಗಿದೆ. ಸರ್ಕಾರ ಇದರಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರು ಅಭಿವೃದ್ಧಿಗೆ ಸಂಬಂಧಿಸಿದ ಇಲಾಖೆಗಳು, ಪ್ರಾಧಿಕಾರದ ಅಧಿಕಾರಿಗಳ ಜೊತೆ ನಗರ ಪ್ರದಕ್ಷಿಣೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು

"ಕುಡಿಯುವ ನೀರಿನ ದರ ಏರಿಕೆ ವಿಚಾರವನ್ನು ಸಚಿವ ಸಂಪುಟ ಸಭೆಯ ಮುಂದೆ ಇಡಲಾಗುವುದು ಎಂದು ಹೇಳಿದ್ದಾರೆ. ನೀರಿನ ದರ ಏರಿಕೆಯಾಗಿ ೧೪ ವರ್ಷಗಳಾಗುತ್ತಾ ಬಂದಿದೆ. ಮಂಡಳಿಗೆ ವರ್ಷಕ್ಕೆ ೧ ಸಾವಿರ ಕೋಟಿ ನಷ್ಟವಾಗುತ್ತಿರುವ ಕಾರಣಕ್ಕೆ ದರ ಏರಿಕೆ ಅನಿವಾರ್ಯವಾಗಿದೆ ಎಂದು ತಿಳಿಸಿದ್ದಾರೆ.

******************

ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರಿವು ಕೇಂದ್ರಗಳು ಜ್ಞಾನದ ಕೇಂದ್ರಗಳಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗಿಗಳಾಗುವ ಅಭ್ಯರ್ಥಿಗಳಿಗೆ ಮಾಹಿತಿ ನೀಡುವಲ್ಲಿ ಹಾಗೂ ಉದ್ಯೋಗಾವಕಾಶಗಳನ್ನು ಅರಸುವವರಿಗೆ ಮಾರ್ಗದರ್ಶಿಯಾಗಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಅರಿವು ಕೇಂದ್ರಗಳಲ್ಲಿ ವಿಶೇಷ ಚೇತನರಿಗೆ ಸ್ನೇಹಮಯಿ ಸಾಧನಗಳನ್ನು ವಿತರಿಸುವ ದರ್ಶಿನಿ ವಿನೂತನ ಕಾರ್ಯಕ್ರಮಕ್ಕೆ ವಿಡಿಯೊ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು. ರಾಜ್ಯದ ೬ ಸಾವಿರ ಗ್ರಾಮ ಪಂಚಾಯತಿಗಳು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತಿಯ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸಭೆಯಲ್ಲಿ ಭಾಗಿಯಾಗಿದ್ದರು.

ಗ್ರಾಮೀಣ ಪ್ರದೇಶದಲ್ಲಿ ಒಟ್ಟು ೫ ಸಾವಿರದ ೮೮೮ ಗ್ರಾಮ ಪಂಚಾಯತಿ ಅರಿವು ಕೇಂದ್ರಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ೫ಸಾವಿರದ ೭೬೭ ಅರಿವು ಕೇಂದ್ರಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ, ಈ ಕೇಂದ್ರಗಳಲ್ಲಿ ಬೆಳಕು ಕಾರ್ಯಕ್ರಮವನ್ನು ಪ್ರಾರಂಭಿಸಲಾಗಿದೆ. ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ ಸುಮಾರು ೫೦ ಲಕ್ಷ  ಮಕ್ಕಳು ನೋಂದಾಯಿಸಲ್ಪಟ್ಟಿದ್ದಾರೆ ಎಂದೂ ಸಚಿವರು ಮಾಹಿತಿ ನೀಡಿದರು.

******************

ಏಷ್ಯಾದ ಅತಿದೊಡ್ಡ ಏರೋ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿ ಇದೇ ೧೦ ರಿಂದ ೧೪ರವರೆಗೆ ನಡೆಯಲಿದೆ.

‘ದಿ ರನ್ ವೇ ಟು ಎ ಬಿಲಿಯನ್ ಆಪರ್ಚುನಿಟೀಸ್’ ಎಂಬ ಘೋಷ್ಯವಾಕ್ಯದೊಂದಿಗೆ, ಈ ಕಾರ್ಯಕ್ರಮವು ವಿದೇಶಿ ಮತ್ತು ಭಾರತೀಯ ಸಂಸ್ಥೆಗಳ ನಡುವೆ ಸಹಭಾಗಿತ್ವವನ್ನು ರೂಪಿಸಲು ಮತ್ತು ಸ್ವದೇಶೀಕರಣ ಪ್ರಕ್ರಿಯೆಯನ್ನು ವೇಗಗೊಳಿಸಲು ವೇದಿಕೆ ಕಲ್ಪಿಸಲಿದೆ.

ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಸಾರ್ವಜನಿಕರು ಪ್ರದರ್ಶನ ವೀಕ್ಷಿಸಲು ಅನುವು ಮಾಡಿಕೊಡಲು ಸಾರ್ವಜನಿಕ ದಿನಗಳಾಗಿ ನಿಗದಿಪಡಿಸಲಾಗಿದೆ. ಈ ಕಾರ್ಯಕ್ರಮವು ವಿಮಾನಯಾನ ಕ್ಷೇತ್ರದ  ದೊಡ್ಡ ಶ್ರೇಣಿಯ ಮಿಲಿಟರಿ ವೇದಿಕೆಗಳ ವಾಯು ಪ್ರದರ್ಶನಗಳು ಮತ್ತು ಸ್ಥಿರ ಪ್ರದರ್ಶನಗಳನ್ನು ಒಳಗೊಂಡಿದೆ.

ಉದ್ಘಾಟನಾ ಕಾರ್ಯಕ್ರಮ, ರಕ್ಷಣಾ ಸಚಿವರ ಸಮಾವೇಶ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ದುಂಡು ಮೇಜಿನ ಸಭೆ, ಮಂಥನ ಸ್ಟಾರ್ಟ್‌ಅಪ್ ಕಾರ್ಯಕ್ರಮ, ಏರ್ ಶೋಗಳು, ಇಂಡಿಯಾ ಪೆವಿಲಿಯನ್ ಒಳಗೊಂಡ ದೊಡ್ಡ ಪ್ರದರ್ಶನ ಪ್ರದೇಶ ಮತ್ತು ವಾಯುಯಾನ ಕಂಪನಿಗಳ ವ್ಯಾಪಾರ ಮೇಳವನ್ನು ಒಳಗೊಂಡಿದೆ.

ಭಾರತ ಪರ ರಾಷ್ಟ್ರಗಳೊಂದಿಗೆ ವ್ಯೂಹಾತ್ಮಕ ಪಾಲುದಾರಿಕೆಯತ್ತ ಮಾತುಕತೆಗೆ ಅನುಕೂಲವಾಗುವಂತೆ, ಭಾರತವು ‘ಅಂತಾರಾಷ್ಟ್ರೀಯ ರಕ್ಷಣೆ ಮತ್ತು ಜಾಗತಿಕ ಹೂಡಿಕೆಯ ಮೂಲಕ ಸೇತುವೆ-ಸ್ಥಿತಿಸ್ಥಾಪಕತ್ವವನ್ನು ನಿರ್ಮಿಸುವುದು’ ಎಂಬ ವಿಷಯದ ಮೇಲೆ ರಕ್ಷಣಾ ಸಚಿವರ ಸಮಾವೇಶ ಆಯೋಜಿಸಲಿದೆ.

ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ದುಂಡು ಮೇಜಿನ ಸಭೆಯಲ್ಲಿ ದೇಶದ ಉತ್ಪಾದನೆಗೆ ವಿದೇಶಿ ಮೂಲ ಉಪಕರಣ ತಯಾರಕರಿಗೆ ಅನುಕೂಲಕರ ವೇದಿಕೆಯನ್ನು ಒದಗಿಸಲಾಗುವುದು. ಜಾಗತಿಕ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ದೇಶೀಯ ಸಾರ್ವಜನಿಕ ವಲಯದ ಮಹಾನಿರ್ದೇಶಕರು ಮತ್ತು ಭಾರತದ ಪ್ರಮುಖ ಖಾಸಗಿ ರಕ್ಷಣಾ ಮತ್ತು ವಾಯುಯಾನ ಉತ್ಪಾದನಾ ಕಂಪನಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿವೆ.

ಏರ್ ಶೋ ಹಿನ್ನೆಲೆಯಲ್ಲಿ ಯಲಹಂಕ ವಾಯುನೆಲೆಯಲ್ಲಿ ಸೂರ್ಯ ಕಿರಣ್ ಸೇರಿದಂತೆ ಯುದ್ಧ ವಿಮಾನಗಳು ಅಭ್ಯಾಸದಲ್ಲಿ ನಿರತವಾಗಿವೆ.

******************

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ನಾಳೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ.  ಒಂದು ದಿನದ ಪ್ರವಾಸದ ಭಾಗವಾಗಿ ಅವರು, ಹಾವೇರಿಯ ರಾಣೆಬೆನ್ನೂರಿಗೆ ಭೇಟಿ ನೀಡಲಿದ್ದು, ಅಲ್ಲಿ ಅವರು, ಕರ್ನಾಟಕ ವೈಭವ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

******************

ಕಳೆದ ಕೆಲ ದಿನಗಳಿಂದ ಪಕ್ಷದೊಳಗೆ ನಡೆಯುತ್ತಿರುವ ಬೆಳವಣಿಗೆ ದುರದೃಷ್ಟಕರ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು ನನಗೆ ಗುಂಪುಗಾರಿಕೆಯಲ್ಲಿ ನಂಬಿಕೆ ಇಲ್ಲ ಎಂದು ಹೇಳಿದ್ದಾರೆ.

ಪಕ್ಷದೊಳಗಿನ ಬೆಳವಣಿಗೆಗಳ ಬಗ್ಗೆ ಕೇಂದ್ರ ನಾಯಕತ್ವವು ತಕ್ಷಣವೇ ಗಮನಹರಿಸಿ, ಎಲ್ಲಾ ಪ್ರಮುಖ ನಾಯಕರೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಆಶಾವಾದ ವ್ಯಕ್ತಪಡಿಸಿದ್ದಾರೆ.

ಪಕ್ಷದ ನಾಯಕತ್ವದ ನಿರ್ಧಾರಕ್ಕೆ ಬದ್ಧರಾಗಿರಬೇಕು," ಎಂದು ಬೊಮ್ಮಾಯಿ ಪ್ರತಿಪಾದಿಸಿದ್ದಾರೆ.

******************

ಬಡತನ ನಿರ್ಮೂಲನೆ ಮಾಡಿದರೆ ಬಾಲ್ಯ ವಿವಾಹ ಪಿಡುಗನ್ನು ಬಗೆಹರಿಸಲು ಸಾಧ್ಯ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ತಿಳಿಸಿದ್ದಾರೆ.

ಚಿತ್ರದುರ್ಗದಲ್ಲಿ ಮಾತನಾಡಿದ ಅವರು, ಬಡತನದದಿಂದಾಗಿ ಹೆಣ್ಣು ಮಕ್ಕಳು ಸಾಕುವುದು ಮತ್ತು ಶಿಕ್ಷಣ ಕೊಡಿಸುವುದು ಕಷ್ಟ. ಹೀಗಾಗಿ ಚಿತ್ರದುರ್ಗ ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣ ಹೆಚ್ಚಾಗಲು ಕಾರಣ ಎಂದು ಅಭಿಪ್ರಾಯಪಟ್ಟಿದ್ದಾರೆ.

(ಧ್ವನಿ: ನಾಗಲಕ್ಷ್ಮೀ ಚೌಧರಿ ೨೫ ಸೆಕೆಂಡ್)

******************

ಸರ್ಕಾರ ಶಿಕ್ಷಣ ಇಲಾಖೆಯಲ್ಲಿ ಹಲವು ಬದಲಾವಣೆಗಳನ್ನು ತರುತ್ತಿದ್ದು, ಇದರಲ್ಲಿ ಕಲಿಕಾ ಯೋಜನೆ ಸೇರಿದೆ ಎಂದು ಶಿಕ್ಷಣ ಸಚಿವ ಮಧುಬಂಗಾರಪ್ಪ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಜಿಲ್ಲೆಯ ಅನೇಕ ವಿಷಯಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗಿದೆ. ಹೊಸ ಜಿಲ್ಲಾಸ್ಪತ್ರೆ ಕುರಿತಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರ ಜೊತೆ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

******************

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ತುಮಕೂರು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿರುವುದಕ್ಕಾಗಿ ರಾಜ್ಯ ಸರ್ಕಾರವು "ಉದ್ಯೋಗ ಸೃಜನೆಯ ಅತ್ಯುತ್ತಮ ಜಿಲ್ಲಾ ಪುರಸ್ಕಾರ" ಹಾಗೂ ಕುಣಿಗಲ್ ತಾಲ್ಲೂಕು ಉಜ್ಜಿನಿ ಗ್ರಾಮ ಪಂಚಾಯತಿಗೆ "ಅತ್ಯುತ್ತಮ ಗ್ರಾಮ ಪಂಚಾಯತಿ ಪುರಸ್ಕಾರ" ನೀಡಿ ಗೌರವಿಸಿದೆ.

ಪ್ರಶಸ್ತಿ ಗೌರವಕ್ಕೆ ಜಿಲ್ಲೆಯು ಭಾಜನವಾಗಲು ಶ್ರಮಿಸಿದ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಜಿ.ಪ್ರಭು ಹಾಗೂ ಅಧಿಕಾರಿ, ಸಿಬ್ಬಂದಿ ವರ್ಗಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ.ಪರಮೇಶ್ವರ್ ಅಭಿನಂದಿಸಿದ್ದಾರೆ.

******************

ಮಹಾತ್ಮ ಗಾಂಧಿ ನರೇಗಾ ಹಬ್ಬ-೨೦೨೫ರಲ್ಲಿ ಚಿತ್ರದುರ್ಗ ಜಿಲ್ಲೆಗೆ ೩ ಪ್ರಶಸ್ತಿಗಳು ಲಭಿಸಿದೆ. ಅತ್ಯುತ್ತಮವಾಗಿ ನರೇಗಾ ಯೋಜನೆಯನ್ನು ಅನುಷ್ಠಾನಗೊಳಿಸಿದ ಜಿಲ್ಲೆಯ "ಸಾಮಾಜಿಕ ಅರಣ್ಯ ಇಲಾಖೆಗೆ ಅತ್ಯುತ್ತಮ ಜಿಲ್ಲಾ ಪ್ರಶಸ್ತಿ", ಚಳ್ಳಕೆರೆ ತಾಲೂಕು, ಬೆಳಗೆರೆ ಗ್ರಾಮ ಪಂಚಾಯಿತಿಗೆ "ಅತ್ಯುತ್ತಮ ಗ್ರಾಮ ಪಂಚಾಯಿತಿ" ಪ್ರಶಸ್ತಿ ಲಭಿಸಿದೆ.

ಚಿತ್ರದುರ್ಗ ತಾಲೂಕಿನ ದ್ಯಾಮವನಹಳ್ಳಿ ಗ್ರಾಮ ಪಂಚಾಯಿತಿಯ ರೇಷ್ಮೆ ಬೆಳೆಗಾರರಾದ ಧನಲಕ್ಷ್ಮಿ ಅವರಿಗೆ "ವಿಶೇಷ ಪ್ರಸಂಶನಾ ಪತ್ರ ವಿತರಣೆ ಪ್ರಶಸ್ತಿ" ಲಭಿಸಿದೆ.

******************

ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕು ಮಲಗುಂದ ಗ್ರಾಮದಲ್ಲಿ ಶಾಸನ ಇರುವ ಒಂದು ವಿಶೇಷ ಗರುಡನಂದಿಗರಿಗೆ ಪತ್ತೆಯಾಗಿದೆ. ಶಿಷ್ಟ ಶಿಲೆಯಲ್ಲಿ ನಿರ್ಮಿತವಾದ ಈ ಕಂಬದ ಮೇಲ್ಭಾಗದಲ್ಲಿ ಪಶ್ಚಿಮಾಭಿಮುಖವಾಗಿ ನಂದಿಯ ವಿಗ್ರಹವನ್ನು ಸ್ಥಾಪಿಸಲಾಗಿದೆ.

ಈ ನಂದಿಯ ದುಂಡುಶಿಲ್ಪದ ಕೆಳಗಿನ ಪಟ್ಟಿಯಲ್ಲಿ ಗರುಡನ ಉಬ್ಬುಶಿಲ್ಪ ಕೆತ್ತಲಾಗಿದೆ. ಗರುಡ ಶಿಲ್ಪದ ಇಕ್ಕೆಲಗಳಲ್ಲಿ ವಿಷ್ಣುವಿನ ಸಂಕೇತವಾಗಿ ಶಂಖ ಹಾಗೂ ಚಿತ್ರಿಸಲಾಗಿದೆ. ಕಮಲಾಪುರ ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ನಿರ್ದೇಶಕ ಡಾ.ಆರ್.ಶೇಜೇಶ್ವರ ಈ ಕುರಿತು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಡಾ.ಆರ್.ಶೇಜೇಶ್ವರ (೩೦ ಸೆಕೆಂಡ್ಸ್)

******************

ರಾಜ್ಯದಲ್ಲಿ ಅಲೆಮಾರಿ ಜನಾಂಗ ಇಂದಿಗೂ ನೆಲೆ ಮತ್ತು ಮೂಲಸೌಕರ್ಯವಿಲ್ಲದೆ ಪರದಾಡುತ್ತಿದೆ. ಅವರಿಗೆ ನಿವೇಶನ, ವಸತಿ ಸೌಲಭ್ಯ ಕಲ್ಪಿಸುವ ಮೂಲಕ 'ಟೆಂಟ್ ಮುಕ್ತ ಕರ್ನಾಟಕ' ನಿರ್ಮಾಣ ಮಾಡುವ ಗುರಿ ಹೊಂದಿರುವುದಾಗಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪಲ್ಲವಿ ಹಾವೇರಿಯಲ್ಲಿ ತಿಳಿಸಿದ್ದಾರೆ.

ಹಾವೇರಿ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿಂದು ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಈಗಾಗಲೇ ರಾಜ್ಯದ ೧೫ ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಅಲೆಮಾರಿ ಜನಾಂಗದ ಕುಂದು ಕೊರತೆಗಳನ್ನು ಆಲಿಸಲಾಗಿದೆ.

ಉಳಿದ ಜಿಲ್ಲೆಗಳಲ್ಲೂ ಪ್ರವಾಸ ಮಾಡಿ ಮಾರ್ಚ್ ೧೨ರೊಳಗೆ ಅಲೆಮಾರಿ ಜನಾಂಗದ ಸ್ಥಿತಿಗತಿ ಕುರಿತು ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

*********ಮುಕ್ತಾಯ*********